# Bangalore
# Regional News
# 12.05.2026 / 6.40 P.M.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಕರ್ನಾಟಕದಲ್ಲಿ ಒಂದು ಸಾವಿರದ 243 ಇ.ವಿ.ಚಾರ್ಜರ್‌ಗಳ ಸ್ಥಾಪನೆಗೆ ಅನುಮೋದನೆ– ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಘೋಷಣೆ
2. ವನ್ಯಜೀವಿ ಸಂಚಾರವಿರುವ ಚಾರಣಪಥ, ಸಂಚಾರಪಥ ಸ್ಥಗಿತಕ್ಕೆ ಅರಣ್ಯ ಸಚಿವ ಈಶ್ವರ ಖಂಡ್ರೆ ಸೂಚನೆ
3. ರಾಜ್ಯದ ಆರು ಗ್ರಾಮ ಪಂಚಾಯತಿಗಳಿಗೆ ಕೇಂದ್ರದ ನಗದು ಪುರಸ್ಕಾರ –ಸಚಿವ ಪ್ರಿಯಾಂಕ್ ಖರ್ಗೆ ಅಭಿನಂದನೆ
4. ಮೀಸಲಾತಿ ಪ್ರಮಾಣವನ್ನು ಶೇಕಡಾ 56ಕ್ಕೆ ಹೆಚ್ಚಿಸುವಂತೆ ಮುಖ್ಯಮಂತ್ರಿಗೆ ರಾಜ್ಯ ವಾಲ್ಮೀಕಿ ಸಮಾಜದ ಸಮಾನ ಮನಸ್ಕರ ವೇದಿಕೆ ಮನವಿ
5. ಮೈಸೂರಿನಲ್ಲಿ ವಿಧಾನಸಭೆ ಸಭಾಧ್ಯಕ್ಷರ ಸಮಿತಿಯ ಮೊದಲ ಹಂತದ ಸಭೆ; ಹಲವು ರಾಜ್ಯಗಳ ಸಭಾಧ್ಯಕ್ಷರು ಭಾಗಿ

---

ಆಧುನಿಕ ಮತ್ತು ವಿಶ್ವಾಸಾರ್ಹ ಇವಿ ಚಾರ್ಜಿಂಗ್ ಪರಿಸರ ವ್ಯವಸ್ಥೆಯನ್ನು ರಚಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ನಡೆದ ಪಿಎಂ ಇ–ಡ್ರೈವ್ ಯೋಜನೆಯಡಿಯಲ್ಲಿ ರಾಷ್ಟ್ರವ್ಯಾಪಿ ಇವಿ ಚಾರ್ಜಿಂಗ್ ಮೂಲಸೌಕರ್ಯ ಸಕ್ರಿಯಗೊಳಿಸುವುದು ಎಂಬ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಅವರು, 123 ಕೋಟಿ 26 ಲಕ್ಷ ರೂಪಾಯಿ ವೆಚ್ಚದಲ್ಲಿ ಒಂದು ಸಾವಿರದ 243 ಇವಿ ಚಾರ್ಜರ್‌ಗಳ ಸ್ಥಾಪನೆಗೆ ಕರ್ನಾಟಕದ ಪ್ರಸ್ತಾವನೆಗಳಿಗೆ ಅನುಮೋದನೆ ನೀಡುವುದಾಗಿ ಘೋಷಿಸಿದ್ದಾರೆ.

ಈವರೆಗೆ 503 ಕೋಟಿ 86 ಲಕ್ಷ ರೂಪಾಯಿ ಒಟ್ಟು ಆರ್ಥಿಕ ವೆಚ್ಚದೊಂದಿಗೆ ಇವಿ ಚಾರ್ಜಿಂಗ್ ಪ್ರಸ್ತಾವನೆಗಳನ್ನು ಅನುಮೋದಿಸಲಾಗಿದೆ ಎಂದು ಹೇಳಿದ್ದಾರೆ.

ಇದೇ ವೇಳೆ, ಮಾತನಾಡಿದ ಬೃಹತ್ ಕೈಗಾರಿಕೆಗಳ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಡಾ.ಹನೀಫ್ ಖುರೇಷಿ, ಭಾರತದ ಎಲೆಕ್ಟ್ರಿಕ್ ವಾಹನಗಳ ಪರಿವರ್ತನೆಯು ಇತ್ತೀಚಿನ ವರ್ಷಗಳಲ್ಲಿ ವಿವಿಧ ವಾಹನ ವಿಭಾಗಗಳಲ್ಲಿ ಗಮನಾರ್ಹ ಪ್ರಗತಿಯನ್ನು ಕಂಡಿದೆ ಎಂದು ತಿಳಿಸಿದ್ದಾರೆ.

2070 ರ ವೇಳೆಗೆ 'ನೆಟ್ ಝೀರೊ' ಅಂದರೆ ಶೂನ್ಯ ಅನಿಲ ಹೊರಸೂಸುವಿಕೆ ಸಾಧಿಸುವ ಭಾರತದ ಬದ್ಧತೆಗೆ ಬೆಂಬಲ ನೀಡುವಲ್ಲಿ ಇದು ಪ್ರಮುಖ ಪಾತ್ರ ವಹಿಸುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

---

ಚಾಮರಾಜನಗರದ ನಾಗಮಲೆ ಅರಣ್ಯದಲ್ಲಿ ಚಿರತೆ ದಾಳಿಯಿಂದ 10 ವರ್ಷದ ಬಾಲಕ ಮೃತಪಟ್ಟಿರುವ ಹಿನ್ನೆಲೆಯಲ್ಲಿ ವನ್ಯಜೀವಿ ಸಂಚಾರ ಇರುವ ಎಲ್ಲ ಚಾರಣಪಥ ಮತ್ತು ಸಂಚಾರಪಥಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.

ಸಾರ್ವಜನಿಕರು ಮತ್ತು ಚಾರಣಿಗರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಮುಂದಿನ ಆದೇಶದವರೆಗೆ ಚಿರತೆ, ಹುಲಿ, ಆನೆ, ಕರಡಿ ಮತ್ತಿತರೆ ವನ್ಯಜೀವಿಗಳು ಸಂಚರಿಸುವ ಮತ್ತು ಮಾನವ–ವನ್ಯಜೀವಿ ಸಂಘರ್ಷ ಸಂಭವಿಸಿರುವ ಕಡೆಗಳಲ್ಲಿ

ಚಾರಣ ಮತ್ತು ಸಂಚಾರ ಪಥಗಳನ್ನು ತಕ್ಷಣದಿಂದಲೇ ಸ್ಥಗಿತಗೊಳಿಸಲು ಸೂಚಿಸಿದ್ದು, ಈ ಸಂಬಂಧ ಅಧಿಕೃತ ಆದೇಶ ಹೊರಡಿಸಿದ್ದಾರೆ.

ಅರಣ್ಯ ಇಲಾಖೆ ಮತ್ತು ಕರ್ನಾಟಕ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಯ ಮೇಲ್ವಿಚಾರಣೆಯಲ್ಲಿ ಕೈಗೊಳ್ಳುವ ಚಾರಣಪಥಗಳಲ್ಲಿ ಎಸ್.ಓ.ಪಿ. ಪಾಲನೆಗೆ ಪೂರ್ವಸಿದ್ಧತೆ ಮಾಡಿಕೊಂಡು ನಂತರ ಚಾರಣ ಚಟುವಟಿಕೆ ಮುಂದುವರಿಸುವಂತೆ ಆದೇಶ ನೀಡಲಾಗಿದೆ.

---

2025ರ ರಾಷ್ಟ್ರೀಯ ಪಂಚಾಯತ್ ಪ್ರಶಸ್ತಿಗಳು ಪ್ರಕಟಗೊಂಡಿದ್ದು ನಗದು ಪುರಸ್ಕಾರ ಪಡೆದುಕೊಂಡಿರುವ ಕರ್ನಾಟಕದ ಆರು ಗ್ರಾಮ ಪಂಚಾಯತಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಚಿವ ಪ್ರಿಯಾಂಕ್ ಖರ್ಗೆ ಅಭಿನಂದಿಸಿದ್ದಾರೆ.

ದೇಶದ 42 ಗ್ರಾಮ ಪಂಚಾಯತಿಗಳು ಪ್ರಶಸ್ತಿಗೆ ಭಾಜನವಾಗಿದ್ದು, ಅವುಗಳಲ್ಲಿ ಕರ್ನಾಟಕದ 6 ಪಂಚಾಯತಿಗಳು ಪ್ರಶಸ್ತಿ ಪಡೆದುಕೊಳ್ಳುವ ಮೂಲಕ ಅತಿ ಹೆಚ್ಚು ಪ್ರಶಸ್ತಿಗಳನ್ನು ಪಡೆದ ಹೆಗ್ಗಳಿಕೆಗೆ ಪಾತ್ರವಾಗಿವೆ.

ಬಡತನ ಮುಕ್ತ ಮತ್ತು ಸುಧಾರಿತ ಜೀವನೋಪಾಯ ವಿಭಾಗದ ಪ್ರಥಮ ಪ್ರಶಸ್ತಿಯು ಹೆಬ್ರಿಯ ಮುದ್ರಾಡಿ ಗ್ರಾಮ ಪಂಚಾಯಿತಿಗೆ ಸಂದಿದ್ದು ಒಂದು ಕೋಟಿ ರೂಪಾಯಿ ನಗದು ಬಹುಮಾನ ಪಡೆದುಕೊಂಡಿದೆ.

ಉಡುಪಿ ಜಿಲ್ಲೆಯ ಕುಂದಾಪುರದ ವಂಡ್ಸೆ ಗ್ರಾಮ ಪಂಚಾಯತಿ ಆರೋಗ್ಯಕರ ಪಂಚಾಯತ್ ವಿಭಾಗದಲ್ಲಿ ದ್ವಿತೀಯ ಪ್ರಶಸ್ತಿಗೆ ಪಾತ್ರವಾಗಿದ್ದು 75 ಲಕ್ಷ ರೂಪಾಯಿ ನಗದು ಬಹುಮಾನಕ್ಕೆ ಪಾತ್ರವಾಗಿದೆ.

ಬೆಂಗಳೂರು ನಗರ ಜಿಲ್ಲೆಯ ಹಾಲನಾಯಕನಹಳ್ಳಿ ಗ್ರಾಮ ಪಂಚಾಯಿತಿಗೆ ಮಕ್ಕಳ ಸ್ನೇಹಿ ಪಂಚಾಯತ್ ವಿಭಾಗದಲ್ಲಿ ದ್ವಿತೀಯ ಪ್ರಶಸ್ತಿ, ಉಡುಪಿ ಜಿಲ್ಲೆಯ ಮಡಮಕ್ಕಿ ಗ್ರಾಮ ಪಂಚಾಯಿತಿಗೆ ನೀರು ಸಮೃದ್ಧ ಪಂಚಾಯತ್ ವಿಭಾಗದಲ್ಲಿ ಎರಡನೇ ಪ್ರಶಸ್ತಿ ದೊರೆತಿದೆ. ಉಡುಪಿ ಜಿಲ್ಲೆಯ ಕಾರ್ಕಳದ ಸಾನೂರು ಗ್ರಾಮ ಪಂಚಾಯತಿಗೆ ಮೂಲ ಸೌಕರ್ಯದಲ್ಲಿ ಸ್ವಾವಲಂಬಿ ಪಂಚಾಯತ್ ವಿಭಾಗದಲ್ಲಿ ತೃತೀಯ ಪ್ರಶಸ್ತಿ ಲಭಿಸಿದೆ.

ಉಡುಪಿ ಜಿಲ್ಲೆಯ ಕುಂದಾಪುರದ ಹಕ್ಲಾಡಿ ಗ್ರಾಮ ಪಂಚಾಯತಿಗೆ ಸಾಮಾಜಿಕವಾಗಿ ನ್ಯಾಯಯುತ ಮತ್ತು ಸುರಕ್ಷಿತ ವಿಭಾಗದಲ್ಲಿ ತೃತೀಯ ಪ್ರಶಸ್ತಿ ಲಭಿಸಿದ್ದು 25 ಲಕ್ಷ ರೂ ನಗದು ಬಹುಮಾನವನ್ನು ಪಡೆದಿದೆ.

ಆರು ಪ್ರಶಸ್ತಿಗಳಲ್ಲಿ ಉಡುಪಿ ಜಿಲ್ಲೆ 5 ಪ್ರಶಸ್ತಿಗಳನ್ನು ಪಡೆದುಕೊಂಡಿದ್ದು, ಜನ ಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ನೌಕರ ವರ್ಗವನ್ನು ಸಚಿವ ಪ್ರಿಯಾಂಕ್ ಖರ್ಗೆ ಅಭಿನಂದಿಸಿದ್ದಾರೆ.

---

ಪರಿಶಿಷ್ಟ ಜಾತಿ ಮೀಸಲಾತಿ ಪ್ರಮಾಣ ಶೇಕಡ 15 ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ಪ್ರಮಾಣ ಶೇಕಡ 3ನ್ನು ಕ್ರಮವಾಗಿ ಶೇಕಡ 17 ಮತ್ತು ಶೇಕಡ 7 ಕ್ಕೆ ಹೆಚ್ಚಿಸಿ ಒಟ್ಟಾರೆ ಮೀಸಲಾತಿ ಪ್ರಮಾಣವನ್ನು ಶೇಕಡ 56 ಕ್ಕೆ ಹೆಚ್ಚಿಸುವಂತೆ ಕರ್ನಾಟಕ ರಾಜ್ಯ ವಾಲ್ಮೀಕಿ ಸಮಾಜದ ಸಮಾನ ಮನಸ್ಕರ ವೇದಿಕೆ ಆಗ್ರಹಿಸಿದೆ.

ಸದರಿ ಕಾನೂನನ್ನು ಸಂವಿಧಾನದ 9ನೇ ಶೆಡ್ಯೂಲ್ ಗೆ ಸೇರಿಸುವ ನಿಟ್ಟಿನಲ್ಲಿ ಕ್ರಮವಹಿಸುವಂತೆ ಮಾಜಿ ಲೋಕಸಭಾ ಸದಸ್ಯರಾದ ವಿ ಎಸ್ ಉಗ್ರಪ್ಪ ಅವರ ನೇತೃತ್ವದಲ್ಲಿ ಗೃಹ ಕಚೇರಿ ಕೃಷ್ಣಾದಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿದೆ.

---

ದೇಶದ ಎಲ್ಲಾ ರಾಜ್ಯಗಳ ವಿಧಾನಸಭೆಗಳ ಕಾರ್ಯವಿಧಾನ ಮತ್ತು ನಡವಳಿಕೆಯಲ್ಲಿ ಏಕರೂಪತೆಯನ್ನು ತರುವ ನಿಟ್ಟಿನಲ್ಲಿ ಲೋಕಸಭೆ ಸಭಾಧ್ಯಕ್ಷ ಓಂ ಬಿರ್ಲಾ ಮಹತ್ವದ ಹೆಜ್ಜೆಯನ್ನಿಟ್ಟಿದ್ದಾರೆ.

ಆರು ರಾಜ್ಯಗಳ ವಿಧಾನಸಭೆಯ ಸಭಾಧ್ಯಕ್ಷರುಗಳನ್ನೊಳಗೊಂಡ ವಿಶೇಷ ಸಮಿತಿಯೊಂದನ್ನು ರಚಿಸಲಾಗಿದ್ದು, ಈ ಸಮಿತಿಯ ಮೊದಲ ಹಂತದ ನಿರ್ಣಾಯಕ ಸಭೆಯು ಇಂದು ಮೈಸೂರಿನ  ಸೈಲೆಂಟ್ ಶೋರ್ಸ್ ಸಭಾಂಗಣದಲ್ಲಿ ನಡೆಯಿತು.

ಸಭೆಯ ಅಧ್ಯಕ್ಷತೆಯನ್ನು ಉತ್ತರ ಪ್ರದೇಶ ವಿಧಾನಸಭೆಯ ಸಭಾಧ್ಯಕ್ಷರಾದ ಸತೀಶ್ ಮಹನಾ ವಹಿಸಿದ್ದರು.

ಸಭೆಯಲ್ಲಿ ರಾಜ್ಯ ವಿಧಾನಸಭೆಯ ಸಭಾಧ್ಯಕ್ಷ ಯು.ಟಿ.ಖಾದರ್ ಹಾಗೂ ನಾಗಾಲ್ಯಾಂಡ್. ಹಿಮಾಚಲ ಪ್ರದೇಶ, ದೆಹಲಿ ವಿಧಾನಸಭೆಯ ಸಭಾಧ್ಯಕ್ಷರು ಭಾಗವಹಿಸಿದ್ದರು.

---

ರಾಜ್ಯದ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಪರಿಸರ ವ್ಯವಸ್ಥೆ ಮತ್ತು ಉತ್ಪಾದನಾ ವಲಯಕ್ಕೆ ಗಮನಾರ್ಹ ಉತ್ತೇಜನ ನೀಡುವ ಎನ್‌ಐಸಿ ತಂತ್ರಜ್ಞಾನ ಹಾಗೂ ಸಾಮಾನ್ಯ ಸೌಲಭ್ಯ ಕೇಂದ್ರವನ್ನು ಬೆಂಗಳೂರಿನ ಪೀಣ್ಯದಲ್ಲಿಂದು ಕೇಂದ್ರ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಸಚಿವ ಜಿತನ್ ರಾಮ್ ಮಾಂಜಿ ಹಾಗೂ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಕೇಂದ್ರ ಸಚಿವ ಜಿತನ್ ರಾಮ್ ಮಾಂಜಿ, ಎಮ್‌ಎಸ್‌ಎಮ್‌ಇಗಳು ಯುವಕರಿಗೆ ಉದ್ಯೋಗವಕಾಶಗಳನ್ನು ಸೃಷ್ಟಿಸಲು ಸಹಾಯಕವಾಗಲಿವೆ ಎಂದು ಹೇಳಿದ್ದಾರೆ.

ಇದೇ ವೇಳೆ ಮಾತನಾಡಿದ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ದೇಶದ ಅತಿ ದೊಡ್ಡ ಕೈಗಾರಿಕಾ ಸಮೂಹಗಳಲ್ಲಿ ಒಂದಾಗಿರುವ ಪೀಣ್ಯಕ್ಕೆ ಎಮ್‌ಎಸ್‌ಎಮ್‌ಇಗಳ ವಿಕಸನಗೊಳ್ಳುತ್ತಿರುವ ತಾಂತ್ರಿಕ ಅಗತ್ಯತೆಗಳನ್ನು ಪೂರೈಸಲು ಸುಧಾರಿತ ಸಾಂಸ್ಥಿಕ ಬೆಂಬಲ ಹಾಗೂ ಸೌಕರ್ಯದ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ.

---

ಸುಮಾರು 900 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಿರುವ ಹಾಸನದ ಮೇಗಾ ಡೇರಿ ಉದ್ಘಾಟನೆಗೆ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಕೇಂದ್ರದ ಹಲವು ಸಚಿವರಿಗೆ ಆಹ್ವಾನ ನೀಡಲು ನಿರ್ಧರಿಸಲಾಗಿದೆ ಎಂದು ಮಾಜಿ ಪ್ರಧಾನಿ ಹಾಗೂ ರಾಜ್ಯಸಭಾ ಸದಸ್ಯ ಎಚ್.ಡಿ. ದೇವೇಗೌಡ ತಿಳಿಸಿದ್ದಾರೆ.

ಹಾಸನದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, . ಜರ್ಮನಿ ಮೂಲದ ಕಂಪೆನಿಯ ಅತ್ಯಾಧುನಿಕ ತಂತ್ರಜ್ಞಾನದ ಮೂಲಕ ನಿರ್ಮಾಣವಾಗಿರುವ ಮೆಗಾ ಡೇರಿಯಿಂದ ಲಕ್ಷಾಂತರ ರೈತರು ಹಾಗೂ ನಿರುದ್ಯೋಗಿಗಳಿಗೆ ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ.

---

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕುಲಪತಿ ಡಾ.ಎಸ್. ವಿದ್ಯಾಶಂಕರ್ ನೇತೃತ್ವದ ನಿಯೋಗವು ಶೈಕ್ಷಣಿಕ–ಕೈಗಾರಿಕಾ ಸಹಭಾಗಿತ್ವದ ಭಾಗವಾಗಿ ಮಹಾರಾಷ್ಟ್ರದಲ್ಲಿರುವ ಆವಿಷ್ಕಾರ, ನಾವೀನ್ಯತೆ ಮತ್ತು ಉತ್ಕೃಷ್ಟ ತರಬೇತಿ ಕೇಂದ್ರ ಮತ್ತು ಇಂಡಮರ್ ಏವಿಯೇಷನ್‌ನ ಏರೋಸ್ಪೇಸ್ ಕೇಂದ್ರಗಳಿಗೆ ಭೇಟಿ ನೀಡಿತು.

ಅಲ್ಲಿನ ನಾವೀನ್ಯತೆ, ಇನ್‌ಕ್ಯೂಬೇಷನ್, ಉದ್ಯಮಶೀಲತೆ ಮತ್ತು ತಂತ್ರಜ್ಞಾನ ಆಧಾರಿತ ಶಿಕ್ಷಣವನ್ನು ಉತ್ತೇಜಿಸುವ ಕೈಗಾರಿಕಾ ಮಾದರಿಯನ್ನು ಅಧ್ಯಯನ ನಡೆಸಿದೆ.

 ಭೇಟಿಯ ವೇಳೆ ಕೃತಕ ಬುದ್ಧಿಮತ್ತೆ, ಏರೋಸ್ಪೇಸ್ ಮತ್ತು ರಕ್ಷಣಾ ತಂತ್ರಜ್ಞಾನಗಳು, ಯುಎವಿ ವ್ಯವಸ್ಥೆಗಳು, ಸ್ಮಾರ್ಟ್ ಮ್ಯಾನುಫ್ಯಾಕ್ಚರಿಂಗ್, ಬ್ಯಾಟರಿ ಮ್ಯಾನೇಜ್‌ಮೆಂಟ್ ಸಿಸ್ಟಮ್‌ಗಳು, ಕ್ವಾಂಟಮ್ ಸಂವಹನ ಮತ್ತು ಅಡ್ವಾನ್ಸ್ ಮೆಟೀರಿಯಲ್ಸ್ ಮುಂತಾದ ವಿಷಯಗಳ ಕುರಿತು ಅಧ್ಯಯನ ನಡೆಸಿದೆ.

ಬಳಿಕ, ನಿಯೋಗವು ನಾಗ್ಪುರ ಇಂಡಮರ್ ಏವಿಯೇಷನ್‌ನ ಏರೋಸ್ಪೇಸ್ ಎಂಆರ್‌ಒ ಕೇಂದ್ರಕ್ಕೆ ಭೇಟಿ ನೀಡಿ, ವಿಮಾನ ನಿರ್ವಹಣೆ, ದುರಸ್ತಿ ಕಾರ್ಯಾಚರಣೆಗಳ ಬಗ್ಗೆ ತಿಳಿದುಕೊಂಡಿತು.

ಭೇಟಿ ಕುರಿತು ಮಾತನಾಡಿದ ವಿಟಿಯು ಕುಲಪತಿ ಡಾ.ಎಸ್.ವಿದ್ಯಾಶಂಕರ್, 'ವಿಟಿಯು ಪ್ರಾಯೋಗಿಕ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ತಿಳಿಸಿದ್ದಾರೆ.

---

ನೌಕಾಪಡೆಯ ಮುಖ್ಯಸ್ಥರಾಗಿ ನೇಮಕಗೊಂಡ ವೈಸ್ ಅಡ್ಮಿರಲ್ ಕೃಷ್ಣ ಸ್ವಾಮಿನಾಥನ್ ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಭಿನಂದಿಸಿದ್ದಾರೆ.

ಇದು ಕರ್ನಾಟಕಕ್ಕೆ ಹೆಮ್ಮೆಯ ಕ್ಷಣ ಎಂದು ಬಣ್ಣಿಸಿದ್ದಾರೆ. ಬೆಂಗಳೂರಿನ ಬಸವನಗುಡಿಯಿಂದ ಬಿಜಾಪುರ ಸೈನಿಕ ಶಾಲೆಗೆ ಸೇರಿ ಅಂತಿಮವಾಗಿ ಭಾರತೀಯ ನೌಕಾಪಡೆಯ ಅತ್ಯುನ್ನತ ಹುದ್ದೆಗೆ ನೇಮಕವಾಗಿರುವ ಸ್ವಾಮಿನಾಥನ್ ಅವರ ಪ್ರಯಾಣ ಸ್ಫೂರ್ತಿದಾಯಕವಾಗಿದೆ ಎಂದು ತಿಳಿಸಿದ್ದಾರೆ.

ಇದೇ 31 ರಂದು ಅಧಿಕಾರ ವಹಿಸಿಕೊಳ್ಳಲಿರುವ ಅವರಿಗೆ ಬಿ.ವೈ.ವಿಜಯೇಂದ್ರ ಶುಭ ಕೋರಿದ್ದಾರೆ.

___________ ಮುಕ್ತಾಯ __________